# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 925
ಸದಸ್ಯರು ಹೆಸರು : ಶ್ರೀ ನಿರಾಣಿ ಹಣಮಂತ್ ರುದ್ರಪ್ಪ (ಪದವೀಧರರ ಕ್ಷೇತ್ರ)
ಉತ್ತರಿಸುವ ಸಚಿವರು : ಗಣಿ ಮತ್ತು ಭೂ ವಿಜ್ಞಾನ ಹಾಗೂ ತೋಟಗಾರಿಕೆ ಸಚಿವರು
ಉತ್ತರಿಸಬೇಕಾದ ದಿನಾಂಕ : 17.12.2024

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಬಾಗಲಕೋಟೆ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯವನ್ನು ಬೇರೆ ಕೃಷಿ ವಿಶ್ವವಿದ್ಯಾಲಯಕ್ಕೆ ಸೇರ್ಪಡೆಗೊಳಿಸುವ ಪ್ರಸ್ತಾವನೆ ಸರ್ಕಾರದ ಮುಂದಿದೆಯೇ; ಇದ್ದಲ್ಲಿ, ಪ್ರಸ್ತಾವನೆ ಸಲ್ಲಿಸಲು ಕಾರಣಗಳೇನು; | ಸರ್ಕಾರದ ಮುಂದಿದೆ.<br>ಕಾರಣವೇನೆಂದರೆ, ಮಂಡ್ಯ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಬಗ್ಗೆ ಕೃಷಿ ಇಲಾಖೆಯು ರಚಿಸಿರುವ ತಜ್ಞರ ಸಮಿತಿಯು ಸಲ್ಲಿಸಿರುವ ವರದಿಯಲ್ಲಿ ಈ ಬಗ್ಗೆ ಶಿಫಾರಸ್ಸು ಮಾಡಲಾಗಿದೆ. |
| ಆ) | ಸದರಿ ವಿಶ್ವವಿದ್ಯಾಲಯವನ್ನು ಮಂಡ್ಯ ಕೃಷಿ ವಿಶ್ವವಿದ್ಯಾಲಯಕ್ಕೆ ಸೇರ್ಪಡೆಗೊಳಿಸಲು ಶಿಫಾರಸ್ಸು ಮಾಡಲಾಗಿದೆಯೇ; (ಈ ಕುರಿತು ಸಂಪೂರ್ಣ ಮಾಹಿತಿ ನೀಡುವುದು) | ಹೌದು.<br>2024-25 ನೇ ಸಾಲಿನ ಆಯವ್ಯಯ ಘೋಷಣೆಯನ್ವಯ ಮಂಡ್ಯ ಜಿಲ್ಲೆಯ ವಿ.ಸಿ. ಫಾರಂ ನಲ್ಲಿ ನೂತನ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸುವ ಬಗ್ಗೆ ತಜ್ಞರ ಸಮಿತಿಯು ಸರ್ಕಾರಕ್ಕೆ ವರದಿಯನ್ನು ಸಲ್ಲಿಸಿರುತ್ತದೆ. ಸದರಿ ಸಮಿತಿಯು ಮಂಡ್ಯ ವಿ.ಸಿ. ಫಾರಂ ನಲ್ಲಿ ಸಮಗ್ರ ಕೃಷಿ ವಿಶ್ವವಿದ್ಯಾಲಯವನ್ನು ಸ್ಥಾಪಿಸಲು ಶಿಫಾರಸ್ಸನ್ನು ಮಾಡಿರುತ್ತದೆ ಹಾಗೂ ಬಾಗಲಕೋಟೆಯ ತೋಟಗಾರಿಕೆ ವಿಜ್ಞಾನಗಳ ವಿಶ್ವವಿದ್ಯಾಲಯದಿಂದ ತೋಟಗಾರಿಕೆ ಕಾಲೇಜು, ಮೈಸೂರು, HREC ಮೈಸೂರು, AICRP (ತಾಳೆಗಳು) ಅರಸೀಕೆರೆ, ತೋಟಗಾರಿಕೆ, ಸಂಶೋಧನೆ ಮತ್ತು ವಿಸ್ತರಣಾ ಕೇಂದ್ರ(HRCE), ಅರಸೀಕೆರೆ, HREC, ಸೋಮನಹಳ್ಳಿ ಕಾವಲ್ (ಹಾಸನ) ಮತ್ತು AICRP (ಆಲೂಗಡ್ಡೆ) ಹಾಸನ ಇವುಗಳನ್ನು ಮಂಡ್ಯ ಸಮಗ್ರ ವಿಶ್ವವಿದ್ಯಾಲಯಕ್ಕೆ ಒಳಪಡಿಸುವಂತೆ ಶಿಫಾರಸ್ಸು ಮಾಡಲಾಗಿರುತ್ತದೆ. |

| | | |
|---|---|---|
| ಇ) | ಈ ವಿಶ್ವವಿದ್ಯಾಲಯವನ್ನು ಸೇರ್ಪಡೆ ಗೊಳಿಸದೇ ಬಾಗಲಕೋಟೆಯಲ್ಲಿಯೇ ಮುಂದುವರೆಸಲು ಇರುವ ಅಡಚಣೆಗಳೇನು; (ಸಂಪೂರ್ಣ ಮಾಹಿತಿ ನೀಡುವುದು) | ಈ ವಿಶ್ವವಿದ್ಯಾಲಯವನ್ನು ಸೇರ್ಪಡೆಗೊಳಿಸದೇ ಬಾಗಲಕೋಟೆಯಲ್ಲಿಯೇ ಮುಂದುವರೆಸಲು ಯಾವುದೇ ಅಡಚಣೆಗಳು ಇರುವುದಿಲ್ಲ. |
| ಈ) | ಸದರಿ ವಿಶ್ವವಿದ್ಯಾಲಯವನ್ನು ಮಂಡ್ಯ ಕೃಷಿ ವಿಶ್ವವಿದ್ಯಾಲಯಕ್ಕೆ ಸೇರ್ಪಡೆಗೊಳಿಸುವ ಪ್ರಸ್ತಾವನೆಯನ್ನು ಸರ್ಕಾರ ಕೈಬಿಡಬೇಕೆಂದು ಆ ಭಾಗದ ಜನಪ್ರತಿನಿಧಿಗಳು ಹಾಗೂ ಸಚಿವರು ಒತ್ತಾಯಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಬಗ್ಗೆ ಸರ್ಕಾರದ ಕ್ರಮವೇನು? | ನಿಜವಾಗಿರುತ್ತದೆ. ಸದರಿ ಪ್ರಸ್ತಾವನೆಯು ಪರಿಶೀಲನೆಯಲ್ಲಿರುತ್ತದೆ. |

HORTI 546 HGM 2024(E)

(ಎಸ್. ಎಸ್. ಮಲ್ಲಿಕಾರ್ಜುನ್)
ಗಣಿ ಮತ್ತು ಭೂ ವಿಜ್ಞಾನ, ತೋಟಗಾರಿಕೆ ಸಚಿವರು